ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**941**
ಸದಸ್ಯರ ಹೆಸರು	:	ಶ್ರೀ ಎನ್.ಎಸ್.ಬೋಸ್ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	12-03-2020
ಉತ್ತರಿಸುವ ಸಚಿವರು	:	ಮುಖ್ಯಮಂತ್ರಿಗಳು

***

	ಪ್ರಶ್ನೆ	ಉತ್ತರ
ಅ)	ರಾಯಚೂರು ಜಿಲ್ಲೆಯಲ್ಲಿರುವ ಆಶಾಪೂರ್ ರಸ್ತೆ, ಜವಹಾರನಗರ, ಕಾಡ್ಲೂರು, ನೀರಮಾನ್ವಿ ಹತ್ತಿರ 110/11 ಕೆ.ವಿ. ವಿದ್ಯುತ್ ಉಪಕೇಂದ್ರಗಳನ್ನು ನಿರ್ಮಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ರಾಯಚೂರು ಜಿಲ್ಲೆಯಲ್ಲಿರುವ ಆಶಾಪೂರ್ ರಸ್ತೆ, ಜವಹಾರನಗರ, ಕಾಡ್ಲೂರು, ನೀರಮಾನ್ವಿ ಹತ್ತಿರ 110/11 ಕೆ.ವಿ. ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸಲು ಕ.ವಿ.ಪ್ರ.ನಿ.ನಿ ವತಿಯಿಂದ ಕ್ರಮ ಕೈಗೊಳ್ಳಲಾಗಿದ್ದು, ವಿವರಗಳು ಕೆಳಕಂಡಂತಿವೆ: 1. **ಆಶಾಪೂರ್ ರಸ್ತೆಯಲ್ಲಿ** ಹೊಸದಾಗಿ ಸ್ಥಾಪಿಸುವ 110/11 ಕೆವಿ ವಿದ್ಯುತ್ ಉಪಕೇಂದ್ರದ ಪ್ರಸ್ತಾವನೆಯು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿಯ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ, ಹಾಗೂ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಲು ಅವಶ್ಯವಿರುವ ಜಮೀನಿನ ಹಂಚಿಕೆಗಾಗಿ ಜಿಲ್ಲಾಧಿಕಾರಿ, ರಾಯಚೂರು ರವರನ್ನು ಕೋರಲಾಗಿದೆ. 2. **ಜವಹಾರನಗರದಲ್ಲಿ** ಹಾಲಿ ಇರುವ 33/11 ಕೆವಿ ವಿದ್ಯುತ್ ಉಪಕೇಂದ್ರವನ್ನು 110/11 ಕೆವಿ ವಿದ್ಯುತ್ ಉಪಕೇಂದ್ರವನ್ನಾಗಿ ಉನ್ನತೀಕರಿಸುವ ಪ್ರಸ್ತಾವನೆಯು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿಯ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ, ಹಾಗೂ ಈ ಯೋಜನೆಯ ವಿಸ್ತೃತ ಯೋಜನಾ ವರದಿಯನ್ನು ಸಿದ್ಧಪಡಿಸುವ ಹಂತದಲ್ಲಿರುತ್ತದೆ. 3. **ಕಾಡ್ಲೂರಲ್ಲಿ** ಹೊಸದಾಗಿ ಸ್ಥಾಪಿಸುವ 110/11 ಕೆವಿ ವಿದ್ಯುತ್ ಉಪಕೇಂದ್ರದ ಪ್ರಸ್ತಾವನೆಯು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿಯ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ, ಹಾಗೂ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಲು ಅವಶ್ಯವಿರುವ ಜಮೀನು ಕ.ವಿ.ಪ್ರ.ನಿ.ನಿ.ಗೆ ಹಂಚಿಕೆಯಾಗಿದ್ದು, ಅಂದಾಜು ಪಟ್ಟಿ ಸಿದ್ಧಪಡಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. 4. **ನೀರಮಾನ್ವಿ (ಹರವಿ)** ಯಲ್ಲಿ ಹೊಸದಾಗಿ 110/11 ಕೆವಿ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಯು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿ ಸಭೆಯಲ್ಲಿ ದಿನಾಂಕ 31-03-2016 ಕ್ಕಿಂತ ಮುಂಚೆಯೇ ಅನುಮೋದನೆಗೊಂಡಿರುತ್ತದೆ ಹಾಗೂ ಸದರಿ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಲು ಅವಶ್ಯವಿರುವ ಜಮೀನನ್ನು ಖರೀದಿಸಲಾಗಿರುತ್ತದೆ.

		ಆದರೆ, ದಿನಾಂಕ 04-12-2018 ರಂದು ನಡೆದ 79ನೇ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿಯ ಸಭೆಯಲ್ಲಿ ದಿನಾಂಕ 31-3-2016 ಕ್ಕಿಂತ ಮುಂಚೆ ಅನುಮೋದನೆ ಪಡೆದ ಎಲ್ಲಾ ಪ್ರಸ್ತಾವನೆಗಳನ್ನು ರದ್ದುಗೊಳಿಸಲು ನಿರ್ಣಯಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ನೀರಮಾನ್ವಿ (ಹರವಿ) ಯಲ್ಲಿ ಹೊಸದಾಗಿ 110/11 ಕೆವಿ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಯನ್ನು ಪುನರ್ ಪರಿಶೀಲಿಸಲು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಗೆ ಸೂಚಿಸಲಾಗಿರುತ್ತದೆ.
ಆ)	ರಾಯಚೂರು ತಾಲ್ಲೂಕಿನ ಶಕ್ತಿನಗರದ ಹತ್ತಿರ GESCOM ಉಪ ವಿಭಾಗ ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ರಾಯಚೂರಿನ ಶಕ್ತಿನಗರದಲ್ಲಿ ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯ ಉಪವಿಭಾಗವನ್ನು ಸ್ಥಾಪಿಸುವ ಪ್ರಸ್ತಾವನೆಯ ತಾಂತ್ರಿಕ ಸಾಧ್ಯತೆಗಳನ್ನು ಪರಿಶೀಲಿಸಲಾಗುತ್ತಿದೆ.

ಸಂಖ್ಯೆ: ಎನರ್ಜಿ 54 ಇಬಿಎಸ್ 2020

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ